# ರತನ್ ಟಾಟಾ, ಸೂಫಿ ಸೈಯದ್ ಖುಸ್ರೋ ಹುಸೇನಿ ಸಹಿತ ಅಗಲಿದ ಗಣ್ಯರಿಗೆ ಉಭಯ ಸದನಗಳಲ್ಲಿ ಸಂತಾಪ



ಬೆಳಗಾವಿ (ಸುವರ್ಣ ವಿಧಾನಸೌಧ), ಡಿ.9: ಕೈಗಾರಿಕೋದ್ಯಮಿ ರತನ್ ಟಾಟಾ, ಕಲಬುರಗಿಯ ಖ್ವಾಜಾ ಬಂದೇನವಾಝ್ ದರ್ಗಾದ ಸೂಫಿ ಸೈಯದ್ ಶಹಾ ಖುಸ್ರೋ ಹುಸೇನಿ, ಮಾಜಿ ಸಚಿವ ಮನೋಹರ್ ತಹಶೀಲ್ದಾರ್ ಸಹಿತ ಇತ್ತೀಚೆಗೆ ಅಗಲಿದ ಗಣ್ಯರಿಗೆ ವಿಧಾನ ಮಂಡಲದ ಉಭಯ ಸದನಗಳಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಸೋಮವಾರ ವಿಧಾನ ಮಂಡಲ ಕಲಾಪ ಆರಂಭಗೊಳ್ಳುತ್ತಿದ್ದಂತೆ ಕ್ರಮವಾಗಿ ಸ್ಪೀಕರ್ ಯು.ಟಿ.ಖಾದರ್ ಮತ್ತು ಸಭಾಪತಿ ಬಸವರಾಜ ಹೊರಟ್ಟಿ, ಸಂತಾಪ ಸೂಚಿಸುವ ನಿರ್ಣಯ ಮಂಡಿಸಿ ಅಗಲಿದ ಗಣ್ಯರನ್ನು ಸದನದ ಗಮನಕ್ಕೆ ತಂದರು.

ಸಂತಾಪ ಸೂಚನೆ ನಿರ್ಣಯವನ್ನು ಬೆಂಬಲಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾನೂನು ಸಚಿವ ಎಚ್.ಕೆ. ಪಾಟೀಲ್, ವಿಪಕ್ಷ ನಾಯಕ ಆರ್.ಅಶೋಕ್, ಜೆಡಿಎಸ್ ನಾಯಕ ಸುರೇಶ್‌ಬಾಬು ಸೇರಿದಂತೆ ಇನ್ನಿತರ ಸದಸ್ಯರು ಅಗಲಿದ ಗಣ್ಯರ ಗುಣಗಾನ ಮಾಡಿ, ಅವರ ಸರಳತೆ, ಮುತ್ಸದ್ದಿತನ, ಅವರೊಂದಿಗಿನ ತಮ್ಮ ಒಡನಾಟವನ್ನು ಸ್ಮರಿಸಿದರು.

ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸಂತಾಪ ಸೂಚನೆ ನಿರ್ಣಯಕ್ಕೆ ಧ್ವನಿಗೂಡಿಸಿ, ಉದ್ಯಮಿ ರತನ್ ಟಾಟಾ ಅವರು ತಮ್ಮ ದುಡಿಮೆಯ ಶೇ.60ರಷ್ಟು ಹಣವನ್ನು ಸಮಾಜ ಸೇವೆಗೆ ಮೀಸಲಿಟ್ಟಿದ್ದಲ್ಲದೆ, ಶೈಕ್ಷಣಿಕ ಏಳಿಗೆಗೆ ವೆಚ್ಚ ಮಾಡಿದ್ದಾರೆ. ಟಾಟಾ ಸ್ಟೀಲ್, ಟಾಟಾ ಮೋಟರ್ಸ್, ಟಾಟಾ ಕನ್ಸಲ್ಟೆಂನ್ಸಿ ಸರ್ವೀಸಸ್, ಟಾಟಾ ತಂತ್ರಜ್ಞಾನ, ಟಾಟಾ ಟೆಲಿ ಸರ್ವೀಸಸ್, ಟಾಟಾ ಫೈನಾನ್ಸ್ ಸೇರಿದಂತೆ ಹಲವು ಉದ್ಯಮಗಳನ್ನು ಕಟ್ಟಿ ಭಾರತೀಯರಿಗೆ ಮಾದರಿಯಾಗಿದ್ದಾರೆ ಎಂದು ಬಣ್ಣಿಸಿದರು.

## 'ಒಕೆ' ಮೂಲ ಗೊತ್ತೆ?

ಶಿವಮೊಗ್ಗ ಜಿಲ್ಲೆ ಸಾಗರ ಮೂಲದ ಮಾಜಿ ಸಚಿವ ಕೆ.ಎಚ್.ಶ್ರೀನಿವಾಸ್ ಅವರು ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ್ದು, ಬಹುಮುಖ ಪ್ರತಿಭೆ. ಕೃಷಿಕರಾಗಿ, ವಕೀಲರಾಗಿ ಸೇವೆ ಸಲ್ಲಿಸಿದ್ದ ಅವರು ಸಾಹಿತ್ಯ ರಚನೆಯ ಜತೆಗೆ ಸಿನೆಮಾದಲ್ಲಿಯೂ ಅಭಿನಯಿಸಿದ್ದಾರೆ. ವಾಹನಗಳ ಹಿಂದೆ 'ಒಕೆ' ಏಕೆ ಬರೆದಿದ್ದಾರೆಂದು ಬಹುತೇಕರಿಗೆ ಗೊತ್ತಿಲ್ಲ. ಈ ಹಿಂದೆ ಮಿಲಿಟರಿ ವಾಹನಗಳಿಗೆ 'ಆನ್ ಕೆರೋಸಿನ್' ಎಂಬ ಕಾರಣಕ್ಕೆ ಒಕೆ ಎಂದು ಬರೆಯಲಾಗುತ್ತಿತ್ತು ಎಂಬ ಅಂಶವನ್ನು ನನಗೆ ಕೆ.ಎಚ್.ಶ್ರೀನಿವಾಸ್ ತಿಳಿಸಿದ್ದರು ಎಂದು ಕಾನೂನು ಸಚಿವ ಎಚ್.ಕೆ. ಪಾಟೀಲ್ ಸ್ಮರಿಸಿದರು.

# ತಹಶೀಲ್ದಾರ್, ಶ್ರೀನಿವಾಸ್, ಟಾಟಾಗೆ ಉಭಯ ಸದನಗಳಲ್ಲಿ ಭಾವಪೂರ್ಣ ಸಂತಾಪ



ಉದಯಕಾಲ ನ್ಯೂಸ್, ವಿಧಾನಮಂಡಲ: ವಿಧಾನಸಭೆಯ ಮಾಜಿ ಉಪ ಸಭಾಧ್ಯಕ್ಷ ಮನೋಹರ ತಹಶೀಲ್ದಾರ್, ಮಾಜಿ ಸಚಿವ ಕೆ.ಎಚ್. ಶ್ರೀನಿವಾಸ್, ಮಾಜಿ ಶಾಸಕರಾದ ಬಸವರಾಜು ಎ.ಎಸ್., ಲಕ್ಷ್ಮೀನಾರಾಯಣ ಕೆ. ವೆಂಕಟರೆಡ್ಡಿ ಮುದ್ನಾಳ್, ದೇಶದ ಖ್ಯಾತ ಕೈಗಾರಿಕೋದ್ಯಮಿ ರತನ್ ನವಲ್ ಟಾಟಾ ಹಾಗೂ ಸೂಫಿ ಸಂತರಾದ ಸೈಯದ್ ಶಹಾ ಖುಸ್ರೋ ಹುಸೇನಿ ಅವರು ನಿಧನಕ್ಕೆ ವಿಧಾನಮಂಡಲದ ಉಭಯ ಸದನಗಳಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ವಿಧಾನಸಭೆಯಲ್ಲಿ ಸಭಾಧ್ಯಕ್ಷ ಯು.ಟಿ.ಖಾದರ್ ಅವರು ಸಂತಾಪ ಸೂಚನ ನಿರ್ಣಯವನ್ನು ಪ್ರಸ್ತಾಪಿಸಿ, ವಿಧಾನಸಭೆಯ ಮಾಜಿ ಉಪಾಧ್ಯಕ್ಷರಾಗಿದ್ದ ಮನೋಹರ ಹನುಮಂತಪ್ಪ ತಹಶೀಲ್ದಾರ್, ಮಾಜಿ ಸಚಿವರಾಗಿದ್ದ ಕೆ.ಎಚ್. ಶ್ರೀನಿವಾಸ್, ಮಾಜಿ ಸದಸ್ಯರಾಗಿದ್ದ ಬಸವರಾಜು.ಎ.ಎಸ್, ಲಕ್ಷ್ಮಿನಾರಾಯಣ.ಕೆ, ವೆಂಕಟರೆಡ್ಡಿ ಮುದ್ನಾಳ್ ಹಾಗೂ ಖ್ಯಾತ ಕೈಗಾರಿಕೋದ್ಯಮಿಯಾಗಿದ್ದ ರತನ್ ಟಾಟಾ, ಸೂಫಿ ಸಂತರಾದ ಸಯ್ಯದ್ ಷಹಾ, ಕುಸ್ರೋ ಉಸೇನಿ ನಿಧನ ಹೊಂದಿರುವುದನ್ನು ಸದನಕ್ಕೆ ತಿಳಿಸಿದರು. ಮನೋಹರ್ ತಹಸೀಲ್ದಾರ್ ಅವರು 1946, ಜುಲೈ 11ರಂದು ಹರಿಹರದಲ್ಲಿ ಜನಿಸಿದ್ದರು. 1978ರಲ್ಲಿ ಮೊದಲ ಬಾರಿಗೆ ಹಾನಗಲ್ ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾಗಿದ್ದರು. ನಂತರ 1989, 1999, 2013ರಲ್ಲಿ ವಿಧಾನಸಭೆಗೆ ಪುನರಾಯ್ಕೆಗೊಂಡಿದ್ದರು. 2013ರಲ್ಲಿ ವಿಧಾನಸಭಾ ಉಪಸಭಾಧ್ಯಕ್ಷರಾಗಿ, 2015ರಲ್ಲಿ ಅಬಕಾರಿ ಸಚಿವರಾಗಿಯೂ ಸೇವೆ ಸಲ್ಲಿಸಿದ್ದರು, ಇವರು ನ.21ರಂದು ನಿಧನ ಹೊಂದಿದ್ದಾರೆ ಎಂದು ತಿಳಿಸಿದರು.

ಮಾಜಿ ಸಚಿವರಾಗಿದ್ದ ಕೆ.ಎಚ್.ಶ್ರೀನಿವಾಸ್ ಅವರು 1938ರಲ್ಲಿ ಸಾಗರ ತಾಲ್ಲೂಕಿನ ಕಾಣಗೋಡು ಗ್ರಾಮದಲ್ಲಿ ಜನಿಸಿದ್ದರು. ಬಹುಮುಖ ಪ್ರತಿಭೆಯಾಗಿದ್ದ ಶ್ರೀನಿವಾಸ್ ಕೃಷಿಕರಾಗಿ, ವಕೀಲರಾಗಿ ಸೇವೆ ಸಲ್ಲಿಸಿದ್ದಲ್ಲದೆ, ಸಾಹಿತ್ಯ ರಚನೆ ಜೊತೆಗೆ ಸಿನಿಮಾದಲ್ಲೂ ಅಭಿನಯಿಸಿದ್ದರು.

ಮೊದಲ ಬಾರಿಗೆ ಚುನಾಯಿತರಾಗಿದ್ದ ಅವರು 6 ಹಾಗೂ 8ನೇ ವಿಧಾನಸಭೆಗೆ ಆಯ್ಕೆಗೊಂಡು ವಾರ್ತಾ ಪ್ರಸಾರ ಮತ್ತು ಯುವಜನ ಸೇವೆಗಳ ಮತ್ತು ಇಂಧನ ಸಚಿವರಾಗಿಯೂ ಸೇವೆ ಸಲ್ಲಿಸಿದ್ದರು. ಜೊತೆಗೆ ವಿಧಾನಪರಿಷತ್‌ನ ವಿರೋಧ ಪಕ್ಷದ ನಾಯಕರಾಗಿಯೂ ಸೇವೆ ಸಲ್ಲಿಸಿದ್ದ ಅವರು ಅಪ್ರತಿಮ ಸಂಸದೀಯ ಪಟುವಾಗಿದ್ದರು. ಆಗಸ್ಟ್ 30ರಂದು ನಿಧನರಾಗಿದ್ದಾರೆ ಎಂದು ತಿಳಿಸಿದರು.

ವಿಧಾನಸಭೆಯ ಮಾಜಿ ಸದಸ್ಯ ಬಸವರಾಜು.ಎ.ಎಸ್ ಅವರು 1943ರಲ್ಲಿ ಅರಸೀಕೆರೆಯಲ್ಲಿ ಜನಿಸಿದ್ದರು. ವೃತ್ತಿಯಲ್ಲಿ ವ್ಯಾಪಾರಸ್ಥರಾಗಿದ್ದ 2004ರಲ್ಲಿ 12ನೇ ವಿಧಾನಸಭೆಗೆ ಅರಸೀಕೆರೆ ಕ್ಷೇತ್ರದಿಂದ ಚುನಾಯಿತರಾಗಿದ್ದರು. ಇವರು ಜ.15ರಂದು ನಿಧನ ಹೊಂದಿದ್ದಾರೆ ಎಂದು ಸಭಾಧ್ಯಕ್ಷರು ಸದನದ ಗಮನಕ್ಕೆ ತಂದು ಸಂತಾಪ ಸೂಚಿಸಿದರು. ಬಳಿಕ ಸಭಾಧ್ಯಕ್ಷರು ಮಂಡಿಸಿದ ಸಂತಾಪ ಸೂಚನ ನಿರ್ಣಯವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಬೆಂಬಲಿಸಿ ಮಾತನಾಡಿ ಮೃತರ ಗುಣಗಾನ ಮಾಡಿದರು. ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಸಚಿವರಾದ ಡಾ.ಜಿ.ಪರಮೇಶ್ವರ್, ಎಚ್.ಕೆ.ಪಾಟೀಲ್ ಮತ್ತಿತರರು ಅಗಲಿದ ಗಣ್ಯರ ನಿಧನಕ್ಕೆ ಸಂತಾಪ ಸೂಚಿಸಿದರು.

ಆನಂತರ ಮೃತರ ಗೌರವಾರ್ಥ ಸದನದಲ್ಲಿ ಮೌನಾಚರಣೆ ಮಾಡಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

## ಮೇಲ್ಮನೆಯಲ್ಲಿ ಸಂತಾಪ

ಇತ್ತೀಚೆಗೆ ಅಗಲಿದ ಖ್ಯಾತ ಕೈಗಾರಿಕೋದ್ಯಮಿ ರತನ್ ಟಾಟಾ, ಮಾಜಿ ಸಚಿವ ಮನೋಹರ್ ತಹಸೀಲ್ದಾರ್ ಸೇರಿದಂತೆ ಮತ್ತಿತರ ಅಗಲಿದ ಗಣ್ಯರಿಗೆ ಸೋಮವಾರ ವಿಧಾನಪರಿಷತ್‌ನಲ್ಲಿ ಸಂತಾಪ ಸೂಚಿಸಲಾಯಿತು.

ದಿನದ ಕಲಾಪ ಬೆಳಗ್ಗೆ 11 ಗಂಟೆಗೆ ಆರಂಭವಾಗುತ್ತಿದ್ದಂತೆ ಸಭಾಪತಿ ಬಸವರಾಜ ಹೊರಟ್ಟಿ ಅವರು, ಅಗಲಿದ ಗಣ್ಯರಿಗೆ ಸಂತಾಪ ಸೂಚಿಸುವ ನಿರ್ಣಯವನ್ನು ಮಂಡಿಸಿದರು.

ಸದನವು ಇತ್ತೀಚೆಗೆ ಅಗಲಿದ ವಿಧಾನಪರಿಷತ್ ಮಾಜಿ ಸದಸ್ಯರಾದ ಕೆ.ಎಚ್.ಶ್ರೀನಿವಾಸ್, ಸುಮಲತಾ ವಸಂತ್ ಅಸ್ನೋಟಿಕರ್, ಕಾಲೇಗುಡ್ಡೇ ಇಸ್ಮಾಯಿಲ್ ಸಾಬ್, ನರೇಂದ್ರ ಕೇಣಿ, ಕೆ.ನಿರಂಜನ ನಾಯ್ಡು, ಸಾವಿತ್ರಮ ಎಂ.ಗುಂಡಿ, ಮಾಜಿ ಸಚಿವ ಮನೋಹರ್ ತಹಸೀಲ್ದಾರ್, ರಾಷ್ಟ್ರ ಕಂಡ ಶ್ರೇಷ್ಠ ಕೈಗಾರಿಕೋದ್ಯಮಿ ರತನ್ ಟಾಟಾ, ಕಲಬುರಗಿ ಜಿಲ್ಲೆಯ ಖಾಜಾಬಂದ ನವಾಜ್ ವಿವಿಯ ಕುಲಪತಿ ಹಾಗೂ ಶಿಕ್ಷಣ ತಜ್ಞ ಡಾ.ಸಯ್ಯದ್ ಷಹಾ ಕುಸ್ರೋ ಉಸೇನಿ ಹಾಗೂ ಖ್ಯಾತ ಸಾಹಿತಿ ರಾಜಶೇಖರ್ ನೀರಾ ಮಾನ್ವಿ ಅವರಿಗೆ ಸಂತಾಪ ಸೂಚಿಸಿತು.



ಸಂತಾಪ ನಿರ್ಣಯದ ಪರವಾಗಿ ಮಾತನಾಡಿದ ಸಭಾಪತಿ, ವಿಧಾನಪರಿಷತ್ ಸದಸ್ಯರಾಗಿದ್ದ ಕೆ.ಎಚ್.ಶ್ರೀನಿವಾಸ್ ಅವರು ಓರ್ವ ಉತ್ತಮ ಸಂಸದೀಯ ಪಟು, ಸಾಹಿತಿ, ಬರಗಾರ, ಸಂಗೀತ ಪ್ರಿಯರಾಗಿದ್ದ ಅವರು ಬಹುಮುಖ ಪ್ರತಿಭೆಯಾಗಿದ್ದರು ಎಂದು ಬಣ್ಣಿಸಿದರು.

ಸಂತಾಪ ನಿರ್ಣಯವನ್ನು ಬೆಂಬಲಿಸಿ ಮಾತನಾಡಿದ ಸಭಾನಾಯಕ ಹಾಗೂ ಸಚಿವ ಎನ್.ಎಸ್.ಬೋಸರಾಜು, ಕೆ.ಎಚ್.ಶ್ರೀನಿವಾಸ್, ಸುಮಲತಾ ಅಸ್ನೋಟಿಕರ್, ಮನೋಹರ್ ತಹಸೀಲ್ದಾರ್ ಸೇರಿದಂತೆ ಅನೇಕರು ಈ ಸದನಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದರು.

ವಿಧಾನಸಭೆಯ ಮಾಜಿ ಉಪಸಭಾಧ್ಯಕ್ಷರಾಗಿದ್ದ ಮನೋಹರ್ ತಹಸೀಲ್ದಾರ್ 4 ಬಾರಿ ಶಾಸಕರಾಗಿ ಅಬಕಾರಿ ಮತ್ತು ಮುಜರಾಯಿ ಇಲಾಖೆಗಳಲ್ಲಿ ಉತ್ತಮ ಸೇವೆ ಸಲ್ಲಿಸಿದ್ದರು ಎಂದು ಸ್ಮರಿಸಿದರು.

ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಅಗಲಿದ ಗಣ್ಯರ ಕೊಡುಗೆಯನ್ನು ಸ್ಮರಿಸಿದರು. ಭಾರತೀಯ ಕೈಗಾರಿಕೋದ್ಯಮಿ ಟಾಟಾ ಸಮೂಹದ ಪ್ರೇರಕ ಶಕ್ತಿ ಮಹಾನ್ ಮಾನವತಾವಾದಿಯಾಗಿದ್ದ ರತನ್ ಟಾಟಾ ಕೋಟ್ಯಂತ ಜನರ ಪ್ರೇರಣಾ ಶಕ್ತಿಯಾಗಿದ್ದರು.

ಟಾಟಾ ಸ್ಟೀಲ್, ಟಾಟಾ ಮೋಟಾರ್ಸ್, ಟಾಟಾ ಕನ್ಸಲ್ಟೆನ್ಸಿ ಸರ್ವೀಸಸ್, ಟಾಟಾ ತಂತ್ರಜ್ಞಾನ, ಟಾಟಾ ಟೆಲಿ ಸರ್ವೀಸಸ್, ಟಾಟಾ ಫೈನಾನ್ಸ್ ಸೇರಿದಂತೆ ಹಲವು ಉದ್ಯಮಗಳನ್ನು ಕಟ್ಟಿ ಭಾರತೀಯರಿಗೆ ಮಾದರಿಯಾಗಿದ್ದಾರೆ. ಅವರ ಅಗಲಿಕೆ ರಾಷ್ಟ್ರಕ್ಕೆ ತುಂಬಲಾರದ ನಷ್ಟ ಎಂದು ಕಂಬನಿ ಮಿಡಿದರು. ಸಂತಾಪ ನಿರ್ಣಯದ ಪರವಾಗಿ ಜೆಡಿಎಸ್‌ನ ಭೋಜೇಗೌಡ ಮಾತನಾಡಿದರು. ಮೃತರ ಗೌರವಾರ್ಥವಾಗಿ ಸದನದ ಸದಸ್ಯರೆಲ್ಲರೂ ಒಂದು ನಿಮಿಷ ಮೌನ ಆಚರಿಸಿದರು.

ರತನ್ ಟಾಟಾ, ಮನೋಹರ್ ತಹಸೀಲ್ದಾರ್, ಶ್ರೀನಿವಾಸ್ ಸೇರಿ ಹಲವರಿಗೆ ಸಂತಾಪ | ಸಿಎಂ, ಡಿಸಿಎಂ ಸೇರಿದಂತೆ ಹಲವರಿಂದ ಗಣ್ಯರ ಗುಣಗಾನ

# ಅಗಲಿದ ಗಣ್ಯರಿಗೆ ಉಭಯ ಸದನದಲ್ಲಿ ಸಂತಾಪ

**ವಿಶ್ವವಾಣಿ ಸುದ್ದಿಮನೆ ವಿಧಾನಸಭೆ/ವಿಧಾನಪರಿಷತ್**

ಅಗಲಿದ ಗಣ್ಯರಿಗೆ ಚಳಿಗಾಲದ ಅಧಿವೇಶನದ ಮೊದಲ ದಿನ ಉಭಯ ಸದನಗಳಲ್ಲಿ ಸಂತಾಪ ಸೂಚಿಸಲಾಯಿತು.

ವಿಧಾನಸಭೆಯಲ್ಲಿ ಸ್ಪೀಕರ್ ಯು.ಟಿ. ಖಾದರ್ ಮಂಡಿಸಿದ ಸಂತಾಪ ಸೂಚನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹ ಸಚಿವ ಡಾ.ಜಿ. ಪರಮೇಶ್ವರ್, ಪ್ರತಿಪಕ್ಷ ನಾಯಕ ಆರ್.ಅಶೋಕ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಹಲವು ಶಾಸಕರು ಸಂತಾಪ ಸೂಚಿಸಿದರು.

ಇದಕ್ಕೂ ಮೊದಲು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ವಿಧಾನಸಭೆಯಲ್ಲಿ ಸ್ಪೀಕರ್ ಯು.ಟಿ.ಖಾದರ್ ಅವರು ಸದನದ ಎಲ್ಲ ಸದಸ್ಯರ ಜೊತೆ ಸಂವಿಧಾನದ ಪ್ರಸ್ತಾವನೆಯನ್ನು ಓದಿದರು. ಇದಾದ ಮೇಲೆ ಅಗಲಿದ ಗಣ್ಯರಿಗೆ ಸಂತಾಪ ಸೂಚನೆ ಮಾಡಿದರು. ವಿಧಾನಪರಿಷತ್ ಸದಸ್ಯರಾಗಿದ್ದ ಕೆ.ಎಚ್.ಶ್ರೀನಿವಾಸ್, ಮಾಜಿ ಸದಸ್ಯೆ ಶುಭಲತಾ ವಸಂತ್ ಅಸ್ನೋಟಿಕರ್, ಮಾಜಿ ಸದಸ್ಯ ಕಾಲೇಬುಡ್ಡ ಇಸ್ಮಾಯಿಲ್ ಸಾಬ್, ಮಾಜಿ ಸದಸ್ಯ ನರೇಂದ್ರ ಖೇಣಿ, ಮಾಜಿ ಸದಸ್ಯ ಕೆ.ನಿರಂಜನ್ ನಾಯ್ಡು, ಮಾಜಿ ಸದಸ್ಯೆ ಸಾವಿತ್ರಮ್ಮ ಎಂ.ಗುಂಡಿ, ಮಾಜಿ ಉಪಸಭಾಧ್ಯಕ್ಷರಾಗಿದ್ದ ಮನೋಹರ ತಹಸೀಲ್ದಾರ್, ಭಾರತೀಯ ಕೈಗಾರಿಕೋದ್ಯಮಿ ರತನ್ ನಾವಲ್ ಟಾಟಾ, ಶಿಕ್ಷಣತಜ್ಞ ಖಾಜಾ ಬಂದೇ ನವಾಜ್ ದರ್ಗಾದ ಪೀಠಾಧಿಪತಿ ಡಾ.ಸೈಯದ್ ಶಹಾ ಖುಸ್ರೋ ಹುಸೇನಿ, ಖ್ಯಾತ ಸಾಹಿತಿ ರಾಜಶೇಖರ ನೀರಮಾನ್ವಿ ಅವರಿಗೆ ವಿಧಾನಪರಿಷತ್ ಕಲಾಪದಲ್ಲಿ ಸಂತಾಪ ಸೂಚಿಸಲಾಯಿತು.



ವಿಧಾನಸಭೆಯಲ್ಲಿ ಸ್ಪೀಕರ್ ಯು.ಟಿ. ಖಾದರ್ ಮಂಡಿಸಿದ ಸಂತಾಪ ಸೂಚನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹ ಸಚಿವ ಡಾ.ಜಿ. ಪರಮೇಶ್ವರ್, ಪ್ರತಿಪಕ್ಷ ನಾಯಕ ಆರ್.ಅಶೋಕ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಹಲವು ಶಾಸಕರು ಸಂತಾಪ ಸೂಚಿಸಿದರು.